ನಿರಾಶ್ರಿತರಿಗೆ ಮನೆಗಳ ಹಸ್ತಾಂತರ

1494(1562), ಶ್ರೀ ಮಾನಪ್ಪ ಡಿ. ವಜ್ಜಲ್ (ಲಿಂಗಸುಗೂರು)

ಅ) ಲಿಂಗಸುಗೂರು ತಾಲ್ಲೂಕಿನ ಚಿಕ್ಕುಪ್ಪೇರಿ ಗ್ರಾಮದಲ್ಲಿ 2008ನೇ ಸಾಲಿನಲ್ಲಿ ನಿರಾಶ್ರಿತರಿಗೆ ಮನೆಗಳನ್ನು ಹಸ್ತಾಂತರಿಸದೇ ವಿಳಂಬ ಆಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ನಿರಾಶ್ರಿತರಿಗೆ ಈವರೆಗೂ ಮನೆಗಳನ್ನು ಹಸ್ತಾಂತರಗೊಳಿಸದಿರಲು ಕಾರಣಗಳೇನು (ವಿವರ ನೀಡುವುದು);

ಇ) ಸರ್ಕಾರ ಈಗಲಾದರೂ ನಿರಾಶ್ರಿತರಿಗೆ ಮನೆಗಳನ್ನು ಹಸ್ತಾಂತರಿಸಲು ಕ್ರಮ ಕೈಗೊಳ್ಳುವುದೇ?

ಶ್ರೀ ಹೆಚ್.ಕೆ.ಪಾಟೀಲ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಬಂದಿದೆ.

ಆ) ಮೂಲಭೂತ ಸೌಕರ್ಯಗಳಾದ ರಸ್ತೆ, ಚರಂಡಿ, ಕುಡಿಯುವ ನೀರಿನ ಸೌಲಭ್ಯ ಪೂರ್ಣ ಪ್ರಮಾಣದಲ್ಲಿ ಪೂರ್ಣಗೊಂಡಿರದೆ ಇರುವುದರಿಂದ ಹಸ್ತಾಂತರಿಸುವುದಿಲ್ಲ.

ಇ) ಸಂಬಂಧಿಸಿದವರಿಗೆ ಕ್ರಮ ಕೈಗೊಳ್ಳಲು ನಿರ್ದೇಶನ ನೀಡಲಾಗುವುದು.

ಕೊಳಗೇರಿ ನಿವಾಸಿಗಳ ವಸತಿ ಸೌಕರ್ಯ

1495(2599), ಶ್ರೀ ಮಾನಪ್ಪ ಡಿ. ವಜ್ಜಲ್ (ಲಿಂಗಸುಗೂರು)

ಅ) ರಾಯಚೂರು ಜಿಲ್ಲೆಯಲ್ಲಿ ಗುರುತಿಸಲಾದ ಕೊಳಗೇರಿಗಳ ಸಂಖ್ಯೆ ಎಷ್ಟು (ವಿವರ ನೀಡುವುದು);